# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಸ್.ಸುಂದರರಾಜ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಳಬಾಗಿಲು ಮತ್ತು ಇನ್ನಿಬ್ಬರು ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ.**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರ ಪತ್ರ ಸಂಖ್ಯೆ. ಜಿಪಂಕೋ /ಸಿಸಿಎ/ಸಿಆರ್.40(ಎ)/ 2012-13, ದಿನಾಂಕ 11-10-2012.
2. ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 258 ಜಿಪಅ 2012, ದಿನಾಂಕ 26-10-2012
3. ಶ್ರೀ ಎಸ್.ಸುಂದರರಾಜ್, ಶ್ರೀ ಎಂ.ವೆಂಕಟೇಶಪ್ಪ ಮತ್ತು ಶ್ರೀ ಸಂಜಪ್ಪ, ಸ.ಕಾ.ಇಂ.ಗಳು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ 21-01-2013, 07-01-2012 ಮತ್ತು 10-01-2013.

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 11-10-2012ರಂದು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ 2010-11ನೇ ಸಾಲಿನ 1ನೇ ವರದಿಯಲ್ಲಿ, 2006-07ನೇ ಸಾಲಿನ ಸಿ ಅಂಡ್ ಎ.ಜಿ. ವರದಿಯ ಆಕ್ಷೇಪಣಾ ಕಂಡಿಕೆ ಸಂ. 2.10/2006-07ರಲ್ಲಿ ಮುಳಬಾಗಿಲು ತಾಲ್ಲೂಕಿನಲ್ಲಿ ಮಾರುಕಟ್ಟೆ ಸಂಕೀರ್ಣವೊಂದರ 74 ಅಂಗಡಿಗಳನ್ನೊಳಗೊಂಡ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸುವಲ್ಲಿ / ಹಸ್ತಾಂತರಿಸುವಲ್ಲಿ ಮತ್ತು ಹರಾಜು ಮಾಡುವಲ್ಲಿನ ವಿಳಂಬದಿಂದ ತಾಲ್ಲೂಕು ಪಂಚಾಯತಿಗೆ ರೂ. 43.56 ಲಕ್ಷ ನಿರೀಕ್ಷಿತ ಆದಾಯ ನಷ್ಟವಾಗಲು ಈ ಕೆಳಕಂಡ ಅಧಿಕಾರಿಗಳು ಕಾರಣರಾಗಿರುವುದರಿಂದ ಅವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4) ಯನ್ನು ತಯಾರಿಸಿ ಸಲ್ಲಿಸಿದ್ದರು:-

*(1) ಶ್ರೀ ಎನ್. ಸುಂದರರಾಜ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಳಬಾಗಿಲು.*

*(2) ಶ್ರೀ ಎಂ.ವೆಂಕಟೇಶಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮುಳಬಾಗಿಲು.*

*(3) ಶ್ರೀ ಸಂಜಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮುಳಬಾಗಿಲು.*

ಆಪಾದಿತ ಮೂರು ಮಂದಿ ಅಧಿಕಾರಿಗಳಿಗೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 26-10-2012 ರಂದು ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4 ರವರೆಗೆ) ಯನ್ನು ಜಾರಿ ಮಾಡಲಾಗಿತ್ತು.

----2

ಆಪಾದಿತ ಅಧಿಕಾರಿಗಳಾದ ಶ್ರೀ ಎಸ್.ಸುಂದರರಾಜ್, ಶ್ರೀ ಎಂ.ವೆಂಕಟೇಶಪ್ಪ ಮತ್ತು ಶ್ರೀ ಸಂಜಪ್ಪ, ಇವರುಗಳು ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕಗಳಂದು ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಸಲ್ಲಿಸಿರುವ ಸಮಜಾಯಷಿಯಲ್ಲಿ ಆರೋಪಗಳನ್ನು ಅಲ್ಲಗಳೆದಿದ್ದಾರೆ. ಈ ಪ್ರಕರಣದಲ್ಲಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಕಾರಣ, ಸತ್ಯಾಸತ್ಯತೆಯನ್ನು ತಿಳಿಯಲು ಎಲ್ಲಾ ಮೂವರು ಅಧಿಕಾರಿಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ, ಸರ್ಕಾರವು ಈ ಕೆಳಕಂಡತೆ ಆದೇಶಿಸಿದೆ.

**ಆದೇಶ ಸಂಖ್ಯೆ. ಗ್ರಾಅಪ 258 ಜಿಪಅ 2012, ಬೆಂಗಳೂರು, ದಿನಾಂಕ 15-03-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 13ರನ್ವಯ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ನಿಯಮ 11 (2)ರಡಿ ಶ್ರೀ ಸೋಸಲೇ ಇಂದೂಧರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಗಳನ್ನಾಗಿ ಹಾಗೂ ನಿಯಮ 11 (5)(ಸಿ)ರನ್ವಯ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಕೋಲಾರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

*(1) ಶ್ರೀ ಎನ್. ಸುಂದರರಾಜ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಳಬಾಗಿಲು.*

*(2) ಶ್ರೀ ಎಂ.ವೆಂಕಟೇಶಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮುಳಬಾಗಿಲು.*

*(3) ಶ್ರೀ ಸಂಜಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮುಳಬಾಗಿಲು.*

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗಧಿಪಡಿಸಿರುವ ಕಾರ್ಯ ವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.

----3

3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ
6. ಶ್ರೀ ಸೋಸಲೆ ಇಂದೂಧರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.8, 15ನೇ ಅಡ್ಡ ರಸ್ತೆ, 5ನೇ ಹಂತ, ಜೆ.ಪಿ.ನಗರ, ಬೆಂಗಳೂರು. (ಫೋನ್ ನಂ. 26596240, ಮೊಬೈಲ್ ನಂ. 9844321549)
7. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಕೋಲಾರ - ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
8. ಶ್ರೀ ಎಸ್.ಸುಂದರರಾಜು, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ.
9. ಶ್ರೀ ಎಂ.ವೆಂಕಟೇಶಪ್ಪ, ಉಪ ನಿಬಂಧಕರು, ಸಹಕಾರ ಸಂಘಗಳ ಇಲಾಖೆ, ಯಾದಗಿರಿ.
10. ಶ್ರೀ ಸಂಜಪ್ಪ, ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೋಲಾರ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
12. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ.
13. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
14. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
15. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.